## ಕರ್ನಾಟಕ ಸರ್ಕಾರ

## ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 06 ಡಿಇಕ್ಯೂ 2018/2985

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು–560 001,
ದಿನಾಂಕ: 10/01/2019.

## ಅನಧಿಕೃತ ಟಿಪ್ಪಣಿ

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಎಲ್ಲಾ ಸಂಸ್ಥೆಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ನಿರ್ವಹಣಾ ವ್ಯವಸ್ಥೆಯನ್ನು ಅಳವಡಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂ: ಇಡಿ 17 ವಿವಿಧ 2019, ದಿ:06/02/2019

ತ್ರಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಇರುವ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಪಾಲಿಟೆಕ್ನಿಕಗಳು ಮತ್ತು ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅತ್ಯಾಧುನಿಕ ತಂತ್ರಜ್ಞಾನವನ್ನೊಳಗೊಂಡ ವೆಬ್ ಆಧಾರಿತ ಬಯೋಮೆಟ್ರಿಕ್ ಉಪಕರಣಗಳನ್ನು ಅಳವಡಿಸಿ ಹಾಜರಾತಿ ವ್ಯವಸ್ಥೆಯನ್ನು ಜಾರಿಗೆ ತರಬೇಕೆಂದು ತಿಳಿಸಲಾಗಿತ್ತು. ಈ ನಿಟ್ಟಿನಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಪರಿವೀಕ್ಷಣಾ ತಂಡವು ರಾಜ್ಯದಲ್ಲಿರುವ ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿರುತ್ತದೆ. ಬಹುತೇಕ ಅಧಿಕಾರಿ/ಸಿಬ್ಬಂದಿಯವರುಗಳು ಕಚೇರಿಗೆ ಸರಿಯಾದ ಸಮಯಕ್ಕೆ ಹಾಜರಾಗದಿರುವುದು ಕಂಡುಬಂದಿರುತ್ತದೆ. ಸಾರ್ವಜನಿಕ ಹಿತದೃಷ್ಟಿಯಿಂದ ಕ್ಷೇತ್ರ ಇಲಾಖೆಗಳಲ್ಲಿ ಕಚೇರಿ ಸಮಯಕ್ಕೆ ಸರಿಯಾಗಿ ಬರುವುದು ಅವಶ್ಯವಾಗಿದ್ದು ಈ ಬಗ್ಗೆ ಸರ್ಕಾರದಿಂದ ಅನೇಕ ಬಾರಿ ಸುತ್ತೋಲೆ/ಆದೇಶಗಳನ್ನು ಹೊರಡಿಸಿದಾಗಿಯೂ ಅವುಗಳನ್ನು ಪಾಲಿಸದಿರುವುದು ಹಾಗು ಸಂಸ್ಥೆಯ ಮುಖ್ಯಸ್ಥರು ಉಸ್ತುವಾರಿ ವಹಿಸದಿರುವುದು ಕಂಡುಬಂದಿದೆ. ಬಯೋಮೆಟ್ರಿಕ್ ಡಾಟ ಗಣಕಯಂತ್ರದಲ್ಲಿ ಶೇಖರಿಸದಿರುವ/ಅಳಿಸಿಹಾಕಿರುವ ಅಂಶ ಗಂಭೀರವಾದ ವಿಷಯವಾಗಿದ್ದು, ಅದನ್ನು ಅಳಿಸಲಾಗದಂತೆ ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು. ಈ ಇಲಾಖೆಯ ಅಧೀನದಲ್ಲಿರುವ ಎಲ್ಲಾ ಸಂಸ್ಥೆಗಳಿಗೆ ಉತ್ತಮ ಗುಣ ಮಟ್ಟದ ಬಯೋಮೆಟ್ರಿಕ್ ಉಪಕರಣಗಳನ್ನು ಸರಬರಾಜುಮಾಡಲು ಹಾಗೂ ಬಯೋಮೆಟ್ರಿಕ್ ಉಪಕರಣವನ್ನು ವಿರೂಪಗೊಳಿಸದಂತೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.

ಸಂಸ್ಥೆಯಲ್ಲಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಯವರುಗಳ ವೇತನವನ್ನು ಪಾವತಿಸುವ ಮೊದಲು ಬಯೋಮೆಟ್ರಿಕ್ ಹಾಜರಾತಿಯ ದಾಖಲೆಗಳನ್ನು ಪರಿಶೀಲಿಸಲು ಸಂಬಂಧಪಟ್ಟ ಪ್ರಾಚಾರ್ಯರಿಗೆ ಸೂಕ್ತ ನಿರ್ದೇಶನ ನೀಡುವುದು ಹಾಗೂ ಸದರಿ ದಾಖಲೆಯಂತೆ ವೇತನ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳುವಂತೆ ತಿಳಿಸುವುದು. ಸರ್ಕಾರ ಸಂಸ್ಥೆಗಳಲ್ಲಿನ ಸಿಬ್ಬಂದಿಗಳ ವೇತನವನ್ನು ಸರ್ಕಾರದಿಂದ ಬಿಡುಗಡೆಯಾಗುವ ಅನುದಾನದ ಮೊತ್ತವನ್ನು ಸಂಸ್ಥೆಗಳಿಗೆ ಹಂಚಿಕೆ ಮಾಡುವ ಪೂರ್ವದಲ್ಲಿ ಬಯೋಮೆಟ್ರಿಕ್ ಹಾಜರಾತಿ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರವೇ ಸಂಬಂಧಪಟ್ಟ ಕಾಲೇಜುಗಳಿಗೆ ಅನುದಾನ ಬಿಡುಗಡೆಗೊಳಿಸಲು ತಿಳಿಸಲಾಗಿದೆ. ಬಯೋಮೆಟ್ರಿಕ್‌ನ ಕಾರ್ಯವಿಧಾನವನ್ನು ಪಾಲಿಸದೇ ಇರುವ ಸಂಸ್ಥೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳ ಸೂಚಿಸಿದೆ.

**ನಿರ್ದೇಶಕರು.**

ಇವರಿಗೆ:

ಜಂಟಿ ನಿರ್ದೇಶಕರು(ಯೋಜನೆ) ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.

DEQ-V warn memo